**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸುನೀಲ್ ಯ ವಲ್ಯಾಪುರ ಇವರು ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

**ಕಲಬುರಗಿ ಜಿಲ್ಲೆಯಲ್ಲಿ ಬಿಸಿಎಂ ಇಲಾಖೆಯಿಂದ ನಡೆಸಲಾಗುತ್ತಿರುವ 128 ಹಾಸ್ಟೆಲ್‌ಗಳ ಪೈಕಿ 36 ಹಾಸ್ಟೆಲ್‌ಗಳು ಬಾಡಿಗೆ ಕಟ್ಟಡದಲ್ಲಿದ್ದು, ಅವುಗಳಿಗೆ ಮಾಸಿಕ ಲಕ್ಷಾಂತರ ರೂಪಾಯಿಗಳನ್ನು ಬಾಡಿಗೆ ಪಾವತಿಸಲಾಗುತ್ತಿದೆ. ಅಷ್ಟಾಗಿಯು ಮಕ್ಕಳಿಗೆ ಸಾಕಾಗುವಷ್ಟು ಕೊಠಡಿಗಳು, ಶೌಚಾಲಯ, ಸ್ನಾನದ ಕೊಠಡಿಗಳು ಇರುವುದಿಲ್ಲ. ದುರಸ್ತಿಗೆ ಬಂದಾಗ ಆ ಕಟ್ಟಡಗಳ ಮಾಲೀಕರು ಅವುಗಳನ್ನು ತಕ್ಷಣಕ್ಕೆ ದುರಸ್ಥಿಯನ್ನು ಮಾಡುತ್ತಿಲ್ಲ. ಇದರಿಂದ, ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುವ ಕುರಿತು.**

**ಹೇಳಿಕೆ:**

ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 128 ವಿದ್ಯಾರ್ಥಿನಿಲಯಗಳು ಮಂಜೂರಾಗಿರುತ್ತವೆ. ಪ್ರಸ್ತುತ 127 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 91 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 33 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಮತ್ತು 3 ವಿದ್ಯಾಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 05 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲಾಗಿರುತ್ತದೆ ಹಾಗೂ ಸ್ವಂತ ಕಟ್ಟಡಗಳ ನಿರ್ಮಾಣಕ್ಕಾಗಿ 31 ನಿವೇಶನಗಳು ಲಭ್ಯವಿರುತ್ತವೆ.

ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸ್ವಂತ ಕಟ್‌ಟಡಗಳ ನಿರ್ಮಾಣವನ್ನು ಕೈಗೊಳ್ಳುವುದು ಅವಶ್ಯವಿರುತ್ತದೆ. ಬಾಡಿಗೆ/ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿಗಳಿಗೆ ಸ್ವಂತ ಕಟ್ಟಡ ನಿರ್ಮಾಣವನ್ನು ಆಯವ್ಯಯದಲ್ಲಿ ಹಾಸ್ಟೆಲ್ ಕಟ್ಟಡಗಳ ನಿರ್ಮಾಣ ಕಾರ್ಯಕ್ರಮದಡಿ ಒದಗಿಸುವ ಅನುದಾನದಿಂದ ಹಾಗೂ ಕಲಬುರಗಿ ಪ್ರದೇಶದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಒದಗಿಸುವ ಅನುದಾನದಿಂದಲೂ ಸಹ ಹಂತ ಹಂತವಾಗಿ ಕೈಗೊಳ್ಳಲಾಗುತ್ತಿದೆ.

2024-25ನೇ ಸಾಲಿಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಪಾಲುದಾರಿಕೆಯೊಂದಿಗೆ ಕಲಬುರಗಿ ಜಿಲ್ಲೆಯಲ್ಲಿ ನಿವೇಶನ ಲಭ್ಯವಿರುವ 31 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲು ಆರ್ಥಿಕ ಇಲಾಖೆಯು ಸಹಮತಿಸಿದ್ದು, ಅದರಂತೆ ಈ ಬಗ್ಗೆ ಅಗತ್ಯ ಕ್ರಮವಹಿಸಲು ಕೋರಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಇಲಾಖೆಯಿಂದ ಪತ್ರ ಬರೆಯಲಾಗಿರುತ್ತದೆ.

ಬಾಡಿಗೆ ಕಟ್ಟಡಗಳನ್ನು ಪಡೆಯಲು ಅನುಸರಿಸಬೇಕಾಗಿರುವ ಕ್ರಮಗಳ ಕುರಿತಂತೆ ಸರ್ಕಾರದಿಂದ ಮೂರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ. ಅದರಂತೆ, ಮಾರ್ಗಸೂಚಿಯನುಸಾರ ಬಾಡಿಗೆ ಕಟ್ಟಡಗಳನ್ನು ಪಡೆಯಲು ಕ್ರಮವಹಿಸಲಾಗುತ್ತಿದೆ. ಎಲ್ಲಾ ಬಾಡಿಗೆ ಕಟ್ಟಡಗಳಲ್ಲಿ ಸಣ್ಣಪುಟ್ಟ ರಿಪೇರಿಗಳು ಇದ್ದಲ್ಲಿ ಅದನ್ನು ಸಂಬಂಧಪಟ್ಟ ಬಾಡಿಗೆ ಕಟ್ಟಡಗಳ ಮಾಲಿಕರೇ ಮಾಡಿಕೊಡಬೇಕಿರುತ್ತದೆ. ಇವುಗಳನ್ನು ಸಂಬಂಧಪಟ್ಟ ಬಾಡಿಗೆ ಕಟ್ಟಡಗಳ ಮಾಲಿಕರಿಂದಲೇ ಅಗತ್ಯ ದುರಸ್ಥಿ ಕಾಮಗಾರಿಗಳನ್ನು ಮಾಡಿಸಲಾಗುತ್ತಿದೆ. ಬಾಡಿಗೆ ಕಟ್ಟಡಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾಬಲಕ್ಕೆ ತಕ್ಕಂತೆ ಕೊಠಡಿಗಳು, ಶೌಚಾಲಯ ಮತ್ತು ಸ್ನಾನಗೃಹಗಳು ಕೊರತೆಯಾಗಿದ್ದಲ್ಲಿ ಸರಿದೂಗಿಸಲು ಕ್ರಮಕೈಗೊಳ್ಳಲಾಗುವುದು.

**ಸಂಖ್ಯೆ: ಹಿಂವಕ 134 ಬಿಎಂಎಸ್ 2024**

**(ಶಿವರಾಜ ಎಸ್ ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು